**All India Radio: Bangalore**
**National Bulletin In Kannada**
**11.05.2026 19.35 p.m.**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**11.05.2026 19.35 p.m.**

---

ಮುಖ್ಯಾಂಶಗಳು

೧. ಸೋಮನಾಥ ದೇವಾಲಯ ಭಾರತದ ನಾಗರಿಕತೆಯ ಧೈರ್ಯ ಮತ್ತು ಭಕ್ತಿಯ ಸಂಕೇತ - ಪ್ರಧಾನಿ ನರೇಂದ್ರ ಮೋದಿ

೨. ರಕ್ಷಣಾ ಸಚಿವರ ಅಧ್ಯಕ್ಷತೆಯಲ್ಲಿ ಅನೌಪಚಾರಿಕ ಸಚಿವರ ಗುಂಪು ಸಭೆ; ಪಶ್ಚಿಮ ಏಷ್ಯಾದಲ್ಲಿನ ಪರಿಸ್ಥಿತಿ ಮೇಲ್ವಿಚಾರಣೆ

೩. ನವದೆಹಲಿಯಲ್ಲಿ ತಡೆರಹಿತ ಟೋಲ್ ಸಂಗ್ರಹ ವ್ಯವಸ್ಥೆ ಉದ್ಘಾಟಿಸಿದ ಕೇಂದ್ರ ಸಚಿವ ನಿತಿನ್ ಗಡ್ಕರಿ

೪. ಪ್ರಧಾನಿ ಅವರ ಏಳು ಪ್ರಮುಖ ಮನವಿಗಳನ್ನು ಪಾಲಿಸುವಂತೆ ಕೇಂದ್ರ ಸಚಿವ ಜಿತೇಂದ್ರ ಸಿಂಗ್ ಕರೆ

೫. ಐಸಿಸಿ ಪುರುಷರ ಏಕದಿನ ಕ್ರಿಕೆಟ್ ರ‍್ಯಾಂಕಿಂಗ್; ಒಂದು ಅಂಕ ಇಳಿಕೆ ನಂತರವೂ ಅಗ್ರಸ್ಥಾನದಲ್ಲಿ ಭಾರತ ಮುಂದುವರಿಕೆ

---

ಗುಜರಾತ್‌ನ ಪುನರ್‌ನಿರ್ಮಿತ ಸೋಮನಾಥ ದೇವಾಲಯದ ಉದ್ಘಾಟನೆಯ ೭೫ ವರ್ಷಗಳ ಸ್ಮರಣಾರ್ಥವಾಗಿ ಹಮ್ಮಿಕೊಳ್ಳಲಾಗಿದ್ದ 'ಸೋಮನಾಥ ಅಮೃತ ಮಹೋತ್ಸವ'ದಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಇಂದು ಭಾಗವಹಿಸಿದ್ದರು.

ಸೋಮನಾಥ ದೇವಾಲಯವು ಭಾರತದ ನಾಗರಿಕತೆಯ ಧೈರ್ಯ ಮತ್ತು ಅವಿರತ ಭಕ್ತಿಯ ಸಂಕೇತವಾಗಿ ಅಚಲವಾಗಿ ನಿಂತಿದೆ ಎಂದು ಪ್ರಧಾನಿ ಶ್ಲಾಘಿಸಿದರು. ಪವಿತ್ರ ದೇವಾಲಯದ ಮೇಲೆ ಹಾರಾಡುತ್ತಿರುವ ಧ್ವಜವು ಭಾರತೀಯರ ನಂಬಿಕೆಯ ವಿಜಯದ ಸಂಕೇತ ಮಾತ್ರವಲ್ಲದೆ, ಕೋಟ್ಯಂತರ ಭಾರತೀಯರ ಸಾಮೂಹಿಕ ಪ್ರಜ್ಞೆಯ ದಿವ್ಯ ಘೋಷಣೆಯಾಗಿದೆ ಹಾಗೂ ಇದು ದೇಶದ ಗೌರವವನ್ನು ಸಾರುತ್ತಾ ಪ್ರತಿಯೊಬ್ಬ ನಾಗರಿಕನಿಗೂ ಪ್ರೇರಣೆಯಾಗಲಿದೆ ಎಂದು ಅವರು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ.

ಸೋಮನಾಥ ದೇವಾಲಯದ ಐತಿಹಾಸಿಕ ಮಹತ್ವವನ್ನು ಸ್ಮರಿಸಿದ ಪ್ರಧಾನಿಗಳು, ಸಾವಿರ ವರ್ಷಗಳ ಹಿಂದೆ ಆರಂಭವಾದ ಸರಣಿ ದಾಳಿಗಳು ಭಾರತದ ಅಸ್ಮಿತೆಯನ್ನು ನಾಶಮಾಡುತ್ತವೆ ಎಂದು ದಾಳಿಕೋರರು ಭಾವಿಸಿದ್ದರು, ಆದರೆ ಅವರ ಆಲೋಚನೆ ತಪ್ಪಾಗಿತ್ತು ಎಂದು ನುಡಿದರು.

---

ಗುಜರಾತ್‌ನ ವಡೋದರಾದಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಸರ್ದಾರ್ ಧಾಮ್ ವಿದ್ಯಾರ್ಥಿನಿಲಯವನ್ನು ಉದ್ಘಾಟಿಸಿದರು.

ಈ ಯೋಜನೆಯು ೧ ಸಾವಿರ ಹುಡುಗರು ಮತ್ತು ೧ ಸಾವಿರ ಹುಡುಗಿಯರಿಗೆ ಹಾಸ್ಟೆಲ್ ಸೌಲಭ್ಯಗಳನ್ನು ಒಳಗೊಂಡಿದೆ, ಜೊತೆಗೆ ಊಟದ ಹಾಲ್, ಗ್ರಂಥಾಲಯ ಮತ್ತು ಸಭಾಂಗಣದಂತಹ ಸೌಲಭ್ಯಗಳನ್ನು ಒಳಗೊಂಡಿದೆ.

---

ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅಧ್ಯಕ್ಷತೆಯಲ್ಲಿ ಇಂದು ಪಶ್ಚಿಮ ಏಷ್ಯಾದಲ್ಲಿನ ಪರಿಸ್ಥಿತಿಯನ್ನು ಮೇಲ್ವಿಚಾರಣೆ ಮಾಡಲು ರಚಿಸಲಾದ ಅನೌಪಚಾರಿಕ ಸಚಿವರ ಗುಂಪು ಸಭೆ ನಡೆಯಿತು.

ಸಭೆಯ ವೇಳೆ, ದೇಶದಲ್ಲಿ ಪೆಟ್ರೋಲಿಯಂ ಉತ್ಪನ್ನಗಳ ಕೊರತೆಯಿಲ್ಲ ಎಂದು ಸ್ಪಷ್ಟಪಡಿಸಿದ ಸರ್ಕಾರ, ಭಾರತ ೬೦ ದಿನಗಳ ಕಚ್ಚಾ ತೈಲ ಮತ್ತು ೪೫ ದಿನಗಳ ಎಲ್‌ಪಿಜಿ ದಾಸ್ತಾನು ಹೊಂದಿದ್ದು, ೭೦೩ ಶತಕೋಟಿ ಡಾಲರ್ ವಿದೇಶಿ ವಿನಿಮಯ ಮೀಸಲಿನೊಂದಿಗೆ ಸುಭದ್ರವಾಗಿದೆ

ಎಂದು ತಿಳಿಸಲಾಗಿದೆ. ಜಾಗತಿಕ ಅನಿಶ್ಚಿತತೆಯ ನಡುವೆಯೂ ದೇಶದಲ್ಲಿ ತೈಲ ಬೆಲೆಗಳು ಸ್ಥಿರವಾಗಿದ್ದು, ಜನರು ಗಾಬರಿಯಿಂದ ಹೆಚ್ಚಿನ ಇಂಧನ ಖರೀದಿ ಮಾಡುವ ಅಗತ್ಯವಿಲ್ಲ ಎಂದು ಭರವಸೆ ನೀಡಲಾಗಿದೆ.

ಇದೇ ವೇಳೆ ಇಂಧನ ಮತ್ತು ವಿದೇಶಿ ವಿನಿಮಯ ಉಳಿಸುವ ನಿಟ್ಟಿನಲ್ಲಿ ಪ್ರಧಾನ ಮಂತ್ರಿಯವರ ಮನವಿಗಳನ್ನು ಜಾರಿಗೆ ತರಲು ಸಚಿವರು ಅಧಿಕಾರಿಗಳಿಗೆ ಸೂಚಿಸಿದರು. ಸಭೆಯಲ್ಲಿ ಕೇಂದ್ರ ಸಚಿವರಾದ ಜೆ.ಪಿ.ನಡ್ಡಾ, ಹರ್ದೀಪ್ ಸಿಂಗ್ ಪುರಿ, ಸರ್ಬಾನಂದ ಸೋನಾವಾಲ್, ಕಿರಣ್ ರಿಜಿಜು, ಡಾ.ಜಿತೇಂದ್ರ ಸಿಂಗ್ ಹಾಗೂ ಕೆ.ರಾಮಮೋಹನ್ ನಾಯ್ಡು ಪಾಲ್ಗೊಂಡಿದ್ದರು.

---

ತಂತ್ರಜ್ಞಾನ ಆಧಾರಿತ ಹೆದ್ದಾರಿ ನಿರ್ವಹಣೆಯ ಹೊಸ ಯುಗಕ್ಕೆ ಭಾರತ ಕಾಲಿಟ್ಟಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ತಿಳಿಸಿದ್ದಾರೆ.

ನವದೆಹಲಿಯ ಮುಂಡ್ಕಾ ಬಕ್ಕರ್‌ವಾಲಾ ಟೋಲ್ ಪ್ಲಾಜಾದಲ್ಲಿ ಇಂದು 'ಮಲ್ಟಿ-ಲೇನ್ ಫ್ರೀ ಫ್ಲೋ' ಎಂಎಲ್‌ಎಫ್‌ಎಫ್ ಎಂಬ ಬ್ಯಾರಿಯರ್ ರಹಿತ ಟೋಲ್ ಸಂಗ್ರಹ ವ್ಯವಸ್ಥೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಈ ನೂತನ ವ್ಯವಸ್ಥೆಯು ಟೋಲ್ ಪ್ಲಾಜಾಗಳಲ್ಲಿನ ದೀರ್ಘ ಕಾಯುವಿಕೆಯನ್ನು ಕೊನೆಗೊಳಿಸುವುದಲ್ಲದೆ, ಇಂಧನ ವ್ಯರ್ಥ, ಮಾಲಿನ್ಯ ಮತ್ತು ಪ್ರಯಾಣದ ವಿಳಂಬವನ್ನು ಗಣನೀಯವಾಗಿ ಕಡಿಮೆ ಮಾಡಲಿದೆ ಎಂದು ತಿಳಿಸಿದರು.

ಈ ಯೋಜನೆಯಿಂದಾಗಿ ವಾರ್ಷಿಕವಾಗಿ ೨೮೫ ಕೋಟಿ ರೂಪಾಯಿ ಮೌಲ್ಯದ ಇಂಧನ ಉಳಿತಾಯವಾಗಲಿದ್ದು, ಸುಮಾರು ೮೧ ಸಾವಿರ ಟನ್ ಇಂಗಾಲದ ಡೈಆಕ್ಸೈಡ್ ಹೊರಸೂಸುವಿಕೆಯನ್ನು ತಗ್ಗಿಸಬಹುದಾಗಿದೆ. ಎಂಎಲ್‌ಎಫ್‌ಎಫ್ ವ್ಯವಸ್ಥೆಯು ಫಾಸ್ಟ್ಯಾಗ್, ಸ್ವಯಂಚಾಲಿತ ನಂಬರ್ ಪ್ಲೇಟ್ ಗುರುತಿಸುವಿಕೆ ತಂತ್ರಜ್ಞಾನ ಮತ್ತು ಕೃತಕ ಬುದ್ಧಿಮತ್ತೆ ಆಧಾರಿತ ಕ್ಯಾಮೆರಾಗಳನ್ನು ಬಳಸಿಕೊಂಡು, ವಾಹನಗಳು ನಿಲ್ಲದೆಯೇ ಟೋಲ್ ಸಂಗ್ರಹಿಸಲು ಅನುವು ಮಾಡಿಕೊಡುತ್ತದೆ. ವಾಹನ ಸವಾರರು ಗಂಟೆಗೆ ೧೦೦ ಕಿಲೋಮೀಟರ್ ವೇಗದಲ್ಲಿ ಸಾಗುತ್ತಿದ್ದರೂ ಟೋಲ್ ಮೊತ್ತವು ಸ್ವಯಂಚಾಲಿತವಾಗಿ ಕಡಿತಗೊಳ್ಳಲಿದೆ ಎಂದು ಮಾಹಿತಿ ನೀಡಿದರು.

ಸುಂಕ ಸಂಗ್ರಹಣೆಯ ಕಾರ್ಯಾಚರಣಾ ವೆಚ್ಚ ಈ ಹಿಂದೆ ಶೇಕಡ ೧೫ ರಷ್ಟಿತ್ತು, ಈ ನೂತನ ವ್ಯವಸ್ಥೆಯಿಂದಾಗಿ ಅದು ಶೇಕಡ ೩ ರಿಂದ ೪ ಕ್ಕೆ ಇಳಿಕೆಯಾಗಲಿದೆ. ಇದರಿಂದ ಸರ್ಕಾರಕ್ಕೆ ವಾರ್ಷಿಕ ಸುಮಾರು ೬ ಸಾವಿರದಿಂದ ೭ ಸಾವಿರ ಕೋಟಿ ರೂಪಾಯಿಗಳಷ್ಟು ಉಳಿತಾಯವಾಗಲಿದೆ ಎಂದು ಸಚಿವರು ತಿಳಿಸಿದರು.

---

ವನ್ಯಜೀವಿಗಳ ಆವಾಸಸ್ಥಾನ ಮರುಸ್ಥಾಪನೆ, ತಂತ್ರಜ್ಞಾನ ಚಾಲಿತ ಮೇಲ್ವಿಚಾರಣೆ ಮತ್ತು ದೊಡ್ಡ ಬೆಕ್ಕುಗಳ ಸಮುದಾಯ ಆಧಾರಿತ ಸಂರಕ್ಷಣೆಗಾಗಿ ಕಾರ್ಪೊರೆಟ್ ನಿಧಿಯ ಅಗತ್ಯವಿದೆ ಎಂದು ಕೇಂದ್ರ ಅರಣ್ಯ ಮತ್ತು ಪರಿಸರ ಸಚಿವ ಭೂಪೇಂದರ್ ಯಾದವ್ ಹೇಳಿದ್ದಾರೆ.

ನವದೆಹಲಿಯಲ್ಲಿ ಇಂದು ಸಿಐಐ-ವಾರ್ಷಿಕ ವ್ಯಾಪಾರ ಶೃಂಗಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಪ್ರಮುಖವಾಗಿ ಹುಲಿ, ಸಿಂಹ, ಚಿರತೆ ಸೇರಿದಂತೆ ಏಳು ಪ್ರಮುಖ ದೊಡ್ಡ ಬೆಕ್ಕುಗಳ ರಕ್ಷಣೆಗಾಗಿ ಉದ್ಯಮ ನಾಯಕರು ಸಕ್ರಿಯವಾಗಿ ಬೆಂಬಲ ನೀಡಬೇಕು ಎಂದು ಕರೆ ನೀಡಿದರು.

ಅಂತಾರಾಷ್ಟ್ರೀಯ ದೊಡ್ಡ ಬೆಕ್ಕುಗಳ ಒಕ್ಕೂಟದ ಅಡಿ ಮುಂದಿನ ತಿಂಗಳ ೧ ಮತ್ತು ೨ ರಂದು ನವದೆಹಲಿಯಲ್ಲಿ ಮೊಟ್ಟ ಮೊದಲ ಅಂತಾರಾಷ್ಟ್ರೀಯ ದೊಡ್ಡ ಬೆಕ್ಕುಗಳ ಶೃಂಗಸಭೆಯನ್ನು ಭಾರತ ಆಯೋಜಿಸಲಿದೆ ಎಂದು ಮಾಹಿತಿ ನೀಡಿದರು.

---

ಪ್ರಧಾನಿ ನರೇಂದ್ರ ಮೋದಿ ಅವರ ೭ ಪ್ರಮುಖ ಮನವಿಗಳನ್ನು ಪಾಲಿಸುವಂತೆ ಜನತೆಗೆ ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್ ಕರೆ ನೀಡಿದ್ದಾರೆ

ನವದೆಹಲಿಯಲ್ಲಿ ನಡೆದ ರಾಷ್ಟ್ರೀಯ ತಂತ್ರಜ್ಞಾನ ದಿನಾಚರಣೆಯಲ್ಲಿ ಮಾತನಾಡುತ್ತಾ, ೧೯೯೮ರ ಪೋಖ್ರಾನ್ ಪರಮಾಣು ಪರೀಕ್ಷೆಯ ಸಾಧನೆಯನ್ನು ಸ್ಮರಿಸಿದ ಅವರು, ಕಳೆದ ದಶಕದಲ್ಲಿ ಭಾರತದ ರಕ್ಷಣಾ ಉತ್ಪಾದನೆ ೧೭೪ ಪಟ್ಟು ಮತ್ತು ರಫ್ತು ೩೪ ಪಟ್ಟು ಹೆಚ್ಚಿದೆ ಎಂದು ತಿಳಿಸಿದರು. ದೇಶದ ನವೋದ್ಯಮಗಳ ಸಂಖ್ಯೆ ೨ ಲಕ್ಷ ದಾಟಿದ್ದು, ಜಾಗತಿಕವಾಗಿ ಭಾರತ ಮೂರನೇ ಸ್ಥಾನದಲ್ಲಿದೆ ಎಂದು ಅವರು ಶ್ಲಾಘಿಸಿದರು.

ಮುಖ್ಯ ವೈಜ್ಞಾನಿಕ ಸಲಹೆಗಾರ ಪ್ರೊಫೆಸರ್ ಅಜಯ್ ಕುಮಾರ್ ಸೂದ್ ಮಾತನಾಡಿ, ಪೋಖ್ರಾನ್ ಸಾಧನೆಯು ಭಾರತದ ವೈಜ್ಞಾನಿಕ ಸ್ವಾವಲಂಬನೆಯ ಸಂಕೇತ ಎಂದರು.

ರಾಷ್ಟ್ರದ ಹಿತದೃಷ್ಟಿಯಿಂದ ಪ್ರಧಾನಿ ನರೇಂದ್ರ ಮೋದಿ ನಿನ್ನೆ ಏಳು ಮನವಿಗಳನ್ನು ಮಾಡಿದರು. ಸಾಧ್ಯವಿರುವ ಕಡೆಗಳಲ್ಲಿ ಮನೆಯಿಂದಲೇ ಕೆಲಸ ಮಾಡುವುದು, ಒಂದು ವರ್ಷದವರೆಗೆ ಚಿನ್ನದ ಖರೀದಿ ಮತ್ತು ವಿದೇಶಿ ಪ್ರವಾಸಗಳನ್ನು ಕೈಬಿಡುವುದು ಹಾಗೂ ಪೆಟ್ರೋಲ್-ಡೀಸೆಲ್ ಉಳಿತಾಯಕ್ಕಾಗಿ ಸಾರ್ವಜನಿಕ ಸಾರಿಗೆಯನ್ನು ಬಳಸುವಂತೆ ಅವರು ತಿಳಿಸಿದರು. ಅಡುಗೆ ಎಣ್ಣೆಯ ಬಳಕೆಯನ್ನು ಮಿತಗೊಳಿಸುವುದು, ರಾಸಾಯನಿಕ ಮುಕ್ತ ನೈಸರ್ಗಿಕ ಕೃಷಿಗೆ ಒತ್ತು ನೀಡುವುದು ಮತ್ತು ವಿದೇಶಿ ಬ್ರಾಂಡ್‌ಗಳ ಬದಲು ಸ್ವದೇಶಿ ವಸ್ತುಗಳನ್ನು ಬಳಸಲು ಪ್ರಧಾನಿ ವಿನಂತಿಸಿದರು.

---

ದೇಶದ ಔಷಧೀಯ ಮತ್ತು ಜೈವಿಕ ತಂತ್ರಜ್ಞಾನ ಕ್ಷೇತ್ರಗಳನ್ನು ಬಲಪಡಿಸುವಲ್ಲಿ ಸಂಶೋಧನೆ ಮತ್ತು ನಾವೀನ್ಯತೆಯ ಪಾತ್ರ ಪ್ರಮುಖವಾಗಿದೆ ಎಂದು ಕೇಂದ್ರ ಮೀನುಗಾರಿಕೆ, ಪಶುಸಂಗೋಪನೆ, ಡೈರಿ ಮತ್ತು ಪಂಚಾಯತ್ ರಾಜ್ ಸಚಿವ ರಾಜೀವ್ ರಂಜನ್ ಸಿಂಗ್ ತಿಳಿಸಿದ್ದಾರೆ.

ನವದೆಹಲಿಯಲ್ಲಿಂದು ನಡೆದ 'ಪ್ರಯೋಗಾಲಯ ಪ್ರಾಣಿಗಳ ಕಲ್ಯಾಣ: ನೀತಿಗಳು ಮತ್ತು ಉತ್ತಮ ಅಭ್ಯಾಸಗಳು' ಕುರಿತ ರಾಷ್ಟ್ರೀಯ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಿದ ಸಚಿವರು, ವೈಜ್ಞಾನಿಕ ಪ್ರಯೋಗಗಳಲ್ಲಿ ಬಳಸುವ ಪ್ರಾಣಿಗಳೊಂದಿಗೆ ಮಾನವೀಯತೆಯಿಂದ ವರ್ತಿಸುವುದು ಅತ್ಯಗತ್ಯ. ವಿಶ್ವವಿದ್ಯಾನಿಲಯಗಳು, ಆಸ್ಪತ್ರೆಗಳು ಮತ್ತು ಸಂಶೋಧನಾ ಸಂಸ್ಥೆಗಳಲ್ಲಿ ಪ್ರಾಣಿಗಳ ಮೇಲಿನ ಪ್ರಯೋಗಗಳನ್ನು ಮೇಲ್ವಿಚಾರಣೆ ಮಾಡುವಲ್ಲಿ 'ಪ್ರಾಣಿಗಳ ಮೇಲಿನ ಪ್ರಯೋಗಗಳ ನಿಯಂತ್ರಣ ಮತ್ತು ಮೇಲ್ವಿಚಾರಣಾ ಸಮಿತಿ' ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ಹೇಳಿದರು.

---

ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಸುವೇಂದು ಅಧಿಕಾರಿ ಇಂದು ಮೊದಲ ಸಚಿವ ಸಂಪುಟ ಸಭೆಯ ಅಧ್ಯಕ್ಷತೆ ವಹಿಸಿದರು. ಇದರ ಬೆನ್ನಲ್ಲೇ ವಿವಿಧ ಇಲಾಖೆಗಳ ಕಾರ್ಯದರ್ಶಿಗಳು, ಜಿಲ್ಲಾಧಿಕಾರಿಗಳು

ಹಾಗೂ ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ಮಹತ್ವದ ಸಭೆಗಳನ್ನು ನಡೆಸಿ ಆಡಳಿತದ ಪ್ರಗತಿಯನ್ನು ಪರಿಶೀಲಿಸಿದರು.

ಆಡಳಿತ ವ್ಯವಸ್ಥೆಯಲ್ಲಿ ಪ್ರಮುಖ ಬದಲಾವಣೆ ತಂದಿರುವ ಸರ್ಕಾರ, ರಾಜ್ಯದ ಶಾಸನಬದ್ಧವಲ್ಲದ ಮಂಡಳಿಗಳು, ನಿಗಮಗಳು ಮತ್ತು ಸಾರ್ವಜನಿಕ ವಲಯದ ಉದ್ದಿಮೆಗಳ ನಾಮನಿರ್ದೇಶಿತ ಸದಸ್ಯರು ಹಾಗೂ ಅಧ್ಯಕ್ಷರ ಅಧಿಕಾರಾವಧಿಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಗೊಳಿಸಿದೆ. ಅಲ್ಲದೆ, ನಿವೃತ್ತಿಯ ನಂತರ ಸರ್ಕಾರದ ವಿವಿಧ ಹುದ್ದೆಗಳಲ್ಲಿ ಮುಂದುವರಿದಿದ್ದ ಅಧಿಕಾರಿಗಳ ಸೇವೆಯನ್ನು ಕೂಡ ಇಂದಿನಿಂದಲೇ ಕೊನೆಗೊಳಿಸಿ ಆದೇಶ ಹೊರಡಿಸಲಾಗಿದೆ.

---

ದೇಶಾದ್ಯಂತ ಪೆಟ್ರೋಲ್, ಡೀಸೆಲ್ ಮತ್ತು ಅಡುಗೆ ಅನಿಲದ ಸಾಕಷ್ಟು ದಾಸ್ತಾನು ಲಭ್ಯವಿದ್ದು, ಪೂರೈಕೆಯಲ್ಲಿ ಯಾವುದೇ ವ್ಯತ್ಯಯವಿಲ್ಲ ಎಂದು ಸರ್ಕಾರ ಸ್ಪಷ್ಟಪಡಿಸಿದೆ. ನವದೆಹಲಿಯಲ್ಲಿ ನಡೆದ ಅಂತರ ಸಚಿವಾಲಯದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಪೆಂಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ, ಕಳೆದ ಮೂರು ದಿನಗಳಲ್ಲಿ ೧.೧೪ ಕೋಟಿ ಎಲ್‌ಪಿಜಿ ಸಿಲಿಂಡರ್‌ಗಳನ್ನು ವಿತರಿಸಲಾಗಿದ್ದು, ಇಂಧನ ಉಳಿತಾಯಕ್ಕಾಗಿ, ಸಾರ್ವಜನಿಕ ಸಾರಿಗೆ ಬಳಸುವಂತೆ ಪ್ರಧಾನಿಯವರ ಮನವಿಯನ್ನು ಪುನರುಚ್ಚರಿಸಿದರು.

---

ಐಸಿಸಿ ಪುರುಷರ ಏಕದಿನ ಕ್ರಿಕೆಟ್ ತಂಡದ ಶ್ರೇಯಾಂಕದ ವಾರ್ಷಿಕ ಪರಿಷ್ಕರಣೆಯ ನಂತರದ ಪಟ್ಟಿ ಪ್ರಕಟವಾಗಿದ್ದು, ಭಾರತ ಅಗ್ರಸ್ಥಾನದಲ್ಲೇ ಮುಂದುವರಿದಿದೆ.

ಭಾರತ ೧೧೯ ರಿಂದ ೧೧೮ ಅಂಕಕ್ಕೆ ಇಳಿದಿದ್ದರೂ, ತಂಡವು ವಿಶ್ವದ ಅಗ್ರ ಶ್ರೇಯಾಂಕದ ಸ್ಥಾನದಲ್ಲಿ ಮುಂದುವರಿದಿದೆ. ಇದೇ ವೇಳೆ ೧೧೩ ರೇಟಿಂಗ್ ಪಾಯಿಂಟ್‌ಗಳೊಂದಿಗೆ ನ್ಯೂಜಿಲೆಂಡ್ ಎರಡನೇ ಸ್ಥಾನಕ್ಕೇರಿದ್ದು, ಅಗ್ರ ಎರಡು ತಂಡಗಳ ನಡುವಿನ ಅಂತರವು ಎಂಟರಿಂದ ಐದಕ್ಕೆ ಕುಸಿದಿದೆ. ಕಳೆದ ವಾರವಷ್ಟೇ ಟಿ೨೦ ಶ್ರೇಯಾಂಕದಲ್ಲೂ ಅಗ್ರಸ್ಥಾನ ಕಾಯ್ದುಕೊಂಡಿದ್ದ ಭಾರತ, ಸೀಮಿತ ಓವರ್‌ಗಳ ಕ್ರಿಕೆಟ್‌ನಲ್ಲಿ ತನ್ನ ಪ್ರಾಬಲ್ಯವನ್ನು ಮುಂದುವರಿಸಿದೆ.

ವಿಶ್ವ ಚಾಂಪಿಯನ್ ಆಸ್ಟ್ರೇಲಿಯಾ ೧೦೯ ರೇಟಿಂಗ್‌ನೊಂದಿಗೆ ಮೂರನೇ ಸ್ಥಾನದಲ್ಲಿ ಸ್ಥಿರವಾಗಿದ್ದರೆ, ದಕ್ಷಿಣ ಆಫ್ರಿಕಾ ತಂಡವು ಪಾಕಿಸ್ತಾನವನ್ನು ಹಿಂದಿಕ್ಕಿ ನಾಲ್ಕನೇ ಸ್ಥಾನಕ್ಕೆ ಜಿಗಿದಿದೆ. ಈ ಮೂಲಕ ಅಗ್ರ ಐದು ತಂಡಗಳ ಪಟ್ಟಿಯಲ್ಲಿ ದಕ್ಷಿಣ ಆಫ್ರಿಕಾ ಗಮನಾರ್ಹ ಪ್ರಗತಿ ಸಾಧಿಸಿದಂತಾಗಿದೆ.

__________ಮುಕ್ತಾಯ___________